3 ವರ್ಷವಾದರೂ ವಿಭಜನೆಗೆ ಅನುಮತಿ ನೀಡದ ಕೇಂದ್ರ | ಮಸೂದೆ ವಾಪಸ್ ಪಡೆದು ಸಚಿವ ಸಂಪುಟದಲ್ಲಿ ಮಂಡನೆ: ಸಚಿವ ಕೃಷ್ಣ ಬೈರೇಗೌಡ ಹೇಳಿಕೆ

ಬಿಬಿಎಂಪಿ ವಿಭಜನೆ ಮಸೂದೆ ವಾಪಸ್!

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ವಿಭಜನೆ ಉದ್ದೇಶದಿಂದ ರೂಪಿಸಿದ್ದ 'ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ಸ್ ಕಾಯಿದೆ-2015' ಅನ್ನು ಕೇಂದ್ರ ಸರಕಾರದಿಂದ ಹಿಂಪಡೆಯಲು ರಾಜ್ಯ ಸಚಿವ ಸಂಪುಟ ತೀರ್ಮಾನಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಸಂಪುಟ ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬಿಬಿಎಂಪಿಯನ್ನು ಮೂರು ಭಾಗಗಳಾಗಿ ವಿಭಜಿಸುವ ಸಂಬಂಧ ಮಸೂದೆಯನ್ನು ಕೇಂದ್ರ ಸರಕಾರಕ್ಕೆ ಕಳುಹಿಸಿ ಮೂರು ವರ್ಷಗಳಾದರೂ ಇದುವರೆಗೆ ಕೇಂದ್ರ ಸರಕಾರ ಅನುಮತಿ ನೀಡಿಲ್ಲ. ಹೀಗಾಗಿ ಮಸೂದೆಯನ್ನು ಹಿಂಪಡೆದು ಸಚಿವ ಸಂಪುಟದಲ್ಲಿ ಮತ್ತೊಮ್ಮೆ ಮಂಡಿಸಿ ಜಾರಿಗೆ ತರಲಾಗುವುದು ಎಂದು ಸ್ಪಷ್ಟಪಡಿಸಿದರು.



2013ರಲ್ಲಿ ಸುಗಮ ಆಡಳಿತದ ದೃಷ್ಟಿಯಿಂದ ಪಾಲಿಕೆಯನ್ನು ವಿಭಜಿಸುವುದಾಗಿ ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆಯಲ್ಲಿ ತಿಳಿಸಿತ್ತು. ಅದರಂತೆ 2015ರಲ್ಲಿ ಸಿದ್ದರಾಮಯ್ಯ ನೇತೃತ್ವದ ಸರಕಾರ 198 ವಾರ್ಡ್‌ಗಳನ್ನು ಹೊಂದಿರುವ ಬಿಬಿಎಂಪಿಯನ್ನು ಬೆಂಗಳೂರು ಕೇಂದ್ರ, ಬೆಂಗಳೂರು ಪೂರ್ವ ಮತ್ತು ಬೆಂಗಳೂರು ಪಶ್ಚಿಮ ಎಂದು ವಿಭಜಿಸುವ ಉದ್ದೇಶದಿಂದ ಮಸೂದೆ ಸಿದ್ಧಪಡಿಸಿತ್ತು.

ಈ ಸಂಬಂಧ ಸರಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಬಿ.ಎಸ್.ಪಾಟೀಲ್ ಅಧ್ಯಕ್ಷತೆಯ ತ್ರಿಸದಸ್ಯ ಸಮಿತಿ ವಿಭಜನೆ ಅನಿವಾರ್ಯ ಎಂದು ವರದಿ ನೀಡಿತ್ತು. ಬಳಿಕ ವಿಧಾನ ಮಂಡಲದಿಂದ ಒಪ್ಪಿತ ರೂಪದಲ್ಲಿರುವ ಕಾಯಿದೆಗೆ ಅನುಮೋದನೆ ನೀಡುವಂತೆ ಕೇಂದ್ರ ಗೃಹ ಇಲಾಖೆಗೆ ಕಳುಹಿಸಲಾಗಿತ್ತು. ಬಿಬಿಎಂಪಿ ತ್ರಿಭಜನೆ ಕುರಿತಂತೆ ಕೇಂದ್ರ ಗೃಹ ಇಲಾಖೆಗೆ ಈವರೆಗೆ 10ಕ್ಕೂ ಹೆಚ್ಚು ಜ್ಞಾಪನಾಪತ್ರ ಹಾಗೂ ಸ್ಪಷ್ಟೀಕರಣ ಕೋರಿತ್ತು. ಹಲವು ಬಾರಿ ಕೇಂದ್ರ ಗೃಹ ಇಲಾಖೆ ಪ್ರಧಾನ ಕಾರ್ಯದರ್ಶಿಗೆ ರಾಜ್ಯ ಸರಕಾರದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಕಾರ್ಯದರ್ಶಿ ಸ್ಪಷ್ಟೀಕರಣ ಸಮೇತ ಪತ್ರ ಬರೆದಿದ್ದರು. ಆದರೂ ಇದುವರೆಗೆ ಬಿಬಿಎಂಪಿ ತ್ರಿಭಜನೆ ಮಸೂದೆಗೆ ಕೇಂದ್ರ ಒಪ್ಪಿಗೆ ನೀಡಿರಲಿಲ್ಲ. ಆದ್ದರಿಂದ ಬೇರೆ ಯೋಜನೆಗಳನ್ನು ಮಾಡುವ ನಿಟ್ಟಿನಲ್ಲಿ ಈ ಮಸೂದೆ ಹಿಂಪಡೆಯಲಾಗಿದೆ ಎಂದು ಸ್ಪಷ್ಟಪಡಿಸಿದರು.

ತಾ.ಪಂ, ಜಿ.ಪಂ ಅನುದಾನ ಹೆಚ್ಚಳ

ಈ ಹಿಂದಿನಿಂದಲೂ 30 ಜಿಲ್ಲಾ ಪಂಚಾಯಿತಿಗಳಿಗೆ ತಲಾ ನಾಲ್ಕು ಕೋಟಿ ರುಪಾಯಿ ಹಾಗೂ 177 ತಾಲೂಕು ಪಂಚಾಯಿತಿಗಳಿಗೆ ತಲಾ ಒಂದು ಕೋಟಿ ರುಪಾಯಿಯನ್ನು ರಾಜ್ಯ ಹಣಕಾಸು ಆಯೋಗದ ಅನಿರ್ಬಂಧಿತ ಅನುದಾನ ನೀಡುತ್ತಿದ್ದು, ಇದನ್ನು ಹೆಚ್ಚಿಸುವಂತೆ ಎರಡೂ ಹಂತದ ಪಂಚಾಯಿತಿಗಳು ಮನವಿ ಸಲ್ಲಿಸಿದ್ದವು. ಆದ್ದರಿಂದ ಪ್ರಸಕ್ತ ಸಾಲಿನಿಂದಲೇ ಪ್ರತಿ ಜಿಲ್ಲಾ ಪಂಚಾಯಿತಿಗೆ ಜನಸಂಖ್ಯೆ ಹಾಗೂ ಭೌಗೋಳಿಕ ವಿಸ್ತೀರ್ಣ ಆಧರಿಸಿ ಕನಿಷ್ಠ 4ರಿಂದ ಗರಿಷ್ಠ 8 ಕೋಟಿ ರುಪಾಯಿವರೆಗೆ ಅನುದಾನ ಹೆಚ್ಚಿಸಲಾಗಿದ್ದು, ಇದಕ್ಕಾಗಿ 172.07 ಕೋಟಿ ರುಪಾಯಿ ಹಾಗೂ ಎಲ್ಲ ತಾಲೂಕು ಪಂಚಾಯಿತಿಗಳಿಗೆ ಒಂದು ಕೋಟಿ ರುಪಾಯಿಯಿಂದ ಎರಡು ಕೋಟಿ ರುಪಾಯಿಗೆ ಅನುದಾನ ಹೆಚ್ಚಿಸಲಾಗುವುದು. ಭೌಗೋಳಿಕ ವಿಸ್ತೀರ್ಣ ಹಾಗೂ ಜನಸಂಖ್ಯೆ ಆಧರಿಸಿ ಮುಂದಿನ ವರ್ಷದಿಂದ ಪ್ರತಿ ತಾಲೂಕು ಪಂಚಾಯಿತಿಗೂ ಕನಿಷ್ಠ ಎರಡು ಕೋಟಿ ರುಪಾಯಿಯಿಂದ ಗರಿಷ್ಠ 3 ಕೋಟಿ ರುಪಾಯಿವರೆಗೆ ಅನುದಾನ ಹೆಚ್ಚಿಸಲು ಸಂಪುಟದಲ್ಲಿ ತೀರ್ಮಾನಿಸಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಸ್ಪಷ್ಟಪಡಿಸಿದರು.

> ಹೆಬ್ಬಾಳ, ನಾಗವಾರ (ಎಚ್.ಸಿ.ವ್ಯಾಲಿ) ಕಣಿವೆಯ ದ್ವಿತೀಯ ಹಂತದಲ್ಲಿ ಸಂಸ್ಕರಿಸಿದ ತ್ಯಾಜ್ಯ ನೀರನ್ನು ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ 65 ಕೆರೆಗಳಿಗೆ ತುಂಬಿಸುವ, ಎರಡನೇ ಹಂತದಲ್ಲಿ ಬಾಗೇಪಲ್ಲಿ ತಾಲೂಕಿನ 24 ಕೆರೆಗಳಿಗೆ ನೀರು ತುಂಬಿಸುವ 70 ಕೋಟಿ ರುಪಾಯಿ ಯೋಜನೆಗೆ ಸಮ್ಮತಿ ನೀಡಲಾಗಿದೆ.
>
> -**ಕೃಷ್ಣ ಬೈರೇಗೌಡ,** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ

ಪ್ರಮುಖ ಅಂಶಗಳು

- ಆಂಧ್ರಪ್ರದೇಶದ ತಿರುಮಲದಲ್ಲಿರುವ ಕರ್ನಾಟಕ ರಾಜ್ಯ ಛತ್ರದ ಆವರಣದಲ್ಲಿ ಅತಿಥಿಗೃಹ ನಿರ್ಮಾಣಕ್ಕೆ 26 ಕೋಟಿ ರು. ಅನುದಾನ ಒದಗಿಸುವ ಪ್ರಸ್ತಾವನೆಗೆ ಅಂಗೀಕಾರ
- ರಾಜ್ಯದ 24 ಜಿಲ್ಲೆಗಳಲ್ಲಿ ಕೃಷಿ ಬೆಳೆಗಳಿಗೆ ಹನಿ ನೀರಾವರಿ ಸೌಲಭ್ಯ ಕಲ್ಪಿಸಲು ಹಾಗೂ ಎಲ್ಲಾ ವರ್ಗದ ರೈತರಿಗೆ ಸಹಾಯಧನ ನೀಡಲು ನಬಾರ್ಡ್ ನೆರವಿನ 20 ಕೋಟಿ ರುಪಾಯಿ ವೆಚ್ಚದಲ್ಲಿ ಅನುಷ್ಠಾನಗೊಳಿಸಲು ನಿರ್ಧರಿಸಲಾಗಿದೆ.
- 'ನವ ಬೆಂಗಳೂರು' ಯೋಜನೆಯಲ್ಲಿ 146.97 ಕೋಟಿ ರು. ವೆಚ್ಚದಲ್ಲಿ ರಸ್ತೆಗಳ ವೈಟ್‌ಟಾಪಿಂಗ್ ಕಾಮಗಾರಿ ಕೈಗೆತ್ತಿಕೊಳ್ಳಲು ಒಪ್ಪಿಗೆ
- ಸಿರಿಧಾನ್ಯ ಬೆಳೆಗಾರರ ಉತ್ತೇಜನಕ್ಕೆ 'ರೈತ ಸಿರಿ' ಎಂಬ ಹೊಸ ಯೋಜನೆ ರೂಪಿಸಿ, ಪ್ರತಿ ಹೆಕ್ಟೇರ್‌ಗೆ 10,000 ರು. ಪ್ರೋತ್ಸಾಹ ಧನ
- ಆಲೂಗಡ್ಡೆ ಬೆಳೆಗಾರರನ್ನು ಪ್ರೋತ್ಸಾಹಿಸಲು ಹೊಸ ಯೋಜನೆ. ಆಲೂಗಡ್ಡೆ ಬಿತ್ತನೆ ಬೀಜ ಖರೀದಿಸಲು ಪ್ರತಿ ಹೆಕ್ಟೇರ್‌ಗೆ 7,500 ಹಾಗೂ ಸಸ್ಯ ಸಂರಕ್ಷಣಾ ಔಷಧ ಖರೀದಿಗೆ ಪ್ರತಿ ಹೆಕ್ಟೇರ್‌ಗೆ 7,200 ರು.ನಂತೆ ಪ್ರೋತ್ಸಾಹ ಧನ
- ಹೆಸರಘಟ್ಟಕ್ಕೆ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ಹಾಗೂ ತ್ಯಾಜ್ಯ ನೀರು ಶುದ್ಧೀಕರಣ ಘಟಕ ಸ್ಥಾಪಿಸಲು 37.28 ಕೋಟಿ ರು.
- ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಪಟ್ಟಣಕ್ಕೆ 24 ಗಂಟೆಯೂ ನೀರು ಸರಬರಾಜು ಮಾಡುವ ಯೋಜನೆಗೆ 95 ಕೋಟಿ ರು.
- ಬೆಂಗಳೂರು ಉತ್ತರ ತಾಲೂಕಿನ ಗಾಣಿಗರಹಳ್ಳಿ ಕೆರೆ ಅಭಿವೃದ್ಧಿಗೆ 13 ಕೋಟಿ ರು.
- ಹಾಸನ ಜಿಲ್ಲೆಯ ಸೋಮನಹಳ್ಳಿ ಕಾವಲ್ ಮತ್ತು ವಿಜಯಪುರ ಜಿಲ್ಲೆಯ ಆಲಮೇಲದಲ್ಲಿ ತೋಟಗಾರಿಕೆ ಮಹಾವಿದ್ಯಾಲಯ ಸ್ಥಾಪನೆ
- ಪಾಂಡವಪುರ ತಾಲೂಕಿನ ಲೋಕಪಾವನಿ ನದಿಯಿಂದ ಸುಂಕಾತೊಣ್ಣೂರು ಕೆರೆ ಹಾಗೂ ಇತರೆ ಕೆರೆಗಳಿಗೆ ನೀರು ತುಂಬಿಸಲು 30 ಕೋಟಿ ರುಪಾಯಿ

ಸಮಾಚಾರ ಸಣ್ಣದಲ್ಲ

ರಾಷ್ಟ್ರೀಯ ಪ್ರಶಸ್ತಿ, ಲಲಿತಕಲೆ, ಜಕಣಾಚಾರಿ ಪ್ರಶಸ್ತಿ ಪುರಸ್ಕೃತರ ಪಟ್ಟಿ

ಬೆಂಗಳೂರು: ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು 2018ನೇ ಸಾಲಿನ ರಾಷ್ಟ್ರೀಯ ಪ್ರಶಸ್ತಿ, ಲಲಿತಕಲೆ ಹಾಗೂ ಜಕಣಾಚಾರಿ ಪ್ರಶಸ್ತಿಗಳಿಗೆ ಭಾಜನರಾದ ಸಾಧಕರ ಅನುಮೋದನೆ ಪಟ್ಟಿಯನ್ನು ಕನ್ನಡ ಮತ್ತು ಸಂಸ್ಕೃತಿ ಸಚಿವ ಡಿ.ಕೆ.ಶಿವಕುಮಾರ್ ಬಿಡುಗಡೆ ಮಾಡಿದರು.

ಕರ್ನಾಟಕ ಸಂಗೀತ, ವಾದ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದಕ್ಕಾಗಿ ಚೆನ್ನೈನ ಟಿ.ಎನ್.ಕೃಷ್ಣನ್ ಅವರಿಗೆ ಟಿ.ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿ, ಗಾಂಧಿವಾದಿ ಹಾಗೂ ಹೋರಾಟಗಾರರಾದ ಎಚ್.ಎಸ್. ದೊರೆಸ್ವಾಮಿ ಅವರಿಗೆ ಬಸವ ಪುರಸ್ಕಾರ ರಾಷ್ಟ್ರೀಯ ಪ್ರಶಸ್ತಿ, ಅಹಿಂಸಾತತ್ತ್ವ ಪಾಲನೆ ಹಾಗೂ ಸಮಾಜ ಸೇವೆಗಾಗಿ ಹಾವೇರಿಯ ಚನ್ನಮ್ಮ ಹಳ್ಳಿಕೇರಿ ಅವರು ಭಗವಾನ್ ಮಹಾವೀರ ಶಾಂತಿ ರಾಷ್ಟ್ರೀಯ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಡಾ. ಗುಬ್ಬಿ ವೀರಣ್ಣ ಪ್ರಶಸ್ತಿಗೆ ಬಾಗಲಕೋಟೆಯ ಪ್ರಕಾಶ್ ಕಡಪಟ್ಟಿ, ಜನಪದಶ್ರೀ ಪ್ರಶಸ್ತಿಗೆ ಬೀದರ್‌ನ ಚಂದ್ರಶಾ ತಮ್ಮಣ್ಣಪ್ಪ ಮಾಳಗೆ ಹಾಗೂ ಮೈಸೂರಿನ ಹಿಣಕಲ್ ಮಹದೇವಯ್ಯ, ವರ್ಣಶಿಲ್ಪಿ ವೆಂಕಟಪ್ಪ ಪ್ರಶಸ್ತಿಗೆ ಬೆಂಗಳೂರಿನ ಸಿ. ಚಂದ್ರಶೇಖರ್, ಜಕಣಾಚಾರಿ ಪ್ರಶಸ್ತಿಗೆ ಉಡುಪಿಯ ಲಕ್ಷ್ಮೀನಾರಾಯಣ ಆಚಾರ್ಯ ಅವರನ್ನು ಆಯ್ಕೆ ಮಾಡಲಾಗಿದೆ.

ದಾನಚಿಂತಾಮಣಿ ಅತ್ತಿಮಬ್ಬೆ ಪ್ರಶಸ್ತಿಗೆ ಧಾರವಾಡದ ಎಚ್.ಎಂ.ಬೀಳಗಿ, ಪ್ರೊ. ಕೆ.ಜಿ.ಕುಂದಣಗಾರ ಗಡಿನಾಡ ಸಾಹಿತ್ಯ ಪ್ರಶಸ್ತಿಗೆ ಚಿಕ್ಕಬಳ್ಳಾಪುರದ ಬಿ. ಗಂಗಾಧರಮೂರ್ತಿ, ಸಂಗೊಳ್ಳಿ ರಾಯಣ್ಣ ಪ್ರಶಸ್ತಿಗೆ ಬಿಜಾಪುರದ ಎಸ್.ಆರ್. ಹಿರೇಮಠ, ಅಕ್ಕಮಹಾದೇವಿ ಪ್ರಶಸ್ತಿಗೆ ದು. ಸರಸ್ವತಿ, ಪಂಪ ಪ್ರಶಸ್ತಿಗೆ ಪ್ರೊ. ಷ.ಶೆಟ್ಟರ್ ಭಾಜನರಾಗಿದ್ದಾರೆ.

ಶಾಂತಲಾ ನಾಟ್ಯ ಪ್ರಶಸ್ತಿಗೆ ಬಿ.ಭಾನುಮತಿ, ಕುಮಾರವ್ಯಾಸ ಪ್ರಶಸ್ತಿಗೆ ರೇವಣಸಿದ್ದ ಶಾಸ್ತ್ರಿ, ಸಂತ ಶಿಶುನಾಳ ಷರೀಫ್ ಪ್ರಶಸ್ತಿಗೆ ಹುಸೇನ್ ಸಾಬ್ ಹಾಗೂ ನಿಜಗುಣಪುರಂದರ ಪ್ರಶಸ್ತಿಗೆ ಬಿ.ಎಸ್. ಮಠ ಭಾಜನರಾಗಿದ್ದಾರೆ. ರಾಷ್ಟ್ರೀಯ ಪ್ರಶಸ್ತಿ 10 ಲಕ್ಷ ರು., ರಾಜ್ಯ ಪ್ರಶಸ್ತಿ 5 ಲಕ್ಷ ನಗದು ಫಲಕ ಹೊಂದಿರುತ್ತದೆ. ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನ ಮಾಡಿ ಗೌರವಿಸಲಿದ್ದಾರೆ.

ಕರ್ನಾಟಕ ಮಾಧ್ಯಮ ಅಕಾಡೆಮಿಯ ನೂತನ ಅಧ್ಯಕ್ಷ ಡಾ. ಪದ್ಮರಾಜ ದಂಡಾವತಿ ಅವರನ್ನು ಕಸಾಪ ಅಧ್ಯಕ್ಷ ಡಾ. ಮನು ಬಳಿಗಾರ್ ಅವರು ಸನ್ಮಾನಿಸಿದರು. ಕರ್ನಾಟಕ ವಿಕಾಸ ರಂಗದ ಪ್ರಧಾನ ಸಂಚಾಲಕ ವ.ಚ.ಚನ್ನೇಗೌಡ, ಡಾ. ಸಂತೋಷ್, ಕುವೆಂಪು ಪ್ರಕಾಶ್ ಇತರರು ಇದ್ದರು.

ಸಮಸ್ಯೆ ಹೇಳಿಕೊಂಡರೂ ಬಗೆಹರಿಸಿಲ್ಲ

ಬೆಂಗಳೂರು: ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ನೀಡಿಲ್ಲ. ನಮ್ಮೆಲ್ಲ ಸಮಸ್ಯೆಗಳನ್ನು ಮುಖ್ಯಮಂತ್ರಿ ಸೇರಿದಂತೆ ಎಲ್ಲ ಮುಖಂಡರಿಗೂ ತಿಳಿಸಿದ್ದೆವು. ಆದರೆ, ಯಾರೂ ಕೂಡ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಿಲ್ಲ ಎಂದು ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಕಾಂಗ್ರೆಸ್ ಶಾಸಕ ಎಸ್.ಟಿ.ಸೋಮಶೇಖರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾವು ಶಾಸಕ ಸ್ಥಾನಕ್ಕೆ ಮಾತ್ರ ರಾಜೀನಾಮೆ ನೀಡಿದ್ದೇವೆ. ರಾಜೀನಾಮೆ ಕ್ರಮಬದ್ಧವಾಗಿಲ್ಲದ ಹಿನ್ನೆಲೆಯಲ್ಲಿ ಗುರುವಾರ ಸಂಜೆ ನಾವು ಸ್ಪೀಕರ್ ಭೇಟಿಯಾಗಿ ಮತ್ತೊಮ್ಮೆ ರಾಜೀನಾಮೆ ನೀಡುತ್ತೇವೆ. ನಾವು ಕಾಂಗ್ರೆಸ್ ಪಕ್ಷಕ್ಕೆ ರಾಜೀನಾಮೆ ಕೊಟ್ಟಿಲ್ಲ ಎಂದು ಸ್ಪಷ್ಟಪಡಿಸಿದರು.

ನಾಯಕರನ್ನು ಆರು ತಿಂಗಳಿಂದ ಭೇಟಿಯಾಗಿದ್ದೇವೆ. ನಮ್ಮ ಸಮಸ್ಯೆಗಳ ಬಗ್ಗೆ ಎಲ್ಲರಿಗೂ ತಿಳಿಸಿದ್ದೇವೆ. ಮುಖ್ಯಮಂತ್ರಿ ಸೇರಿ ಎಲ್ಲರಿಗೂ ಸಮಸ್ಯೆಯನ್ನು ಗಮನಕ್ಕೆ ತಂದಿದ್ದೇವೆ. ಆಗ ಎಲ್ಲರೂ ನಮ್ಮನ್ನು ಕಡೆಗಣಿಸಿದ್ದರು. ಈಗ ಬಂದು ಭೇಟಿಯಾದರೆ ಏನುಪಯೋಗ? ಹಾಗಾಗಿ ನಮ್ಮ ನಿರ್ಧಾರ ತೆಗೆದುಕೊಂಡಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಒಬ್ಬ ಅಧಿಕಾರಿಯೇ ಎಲ್ಲವನ್ನೂ ಮಾಡುವುದಾದರೂ ನಾವು ಏಕೆ ಶಾಸಕರಾಗಿ ಇರಬೇಕು? ಆದ್ದರಿಂದ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇವೆ ಎಂದು ತಿಳಿಸಿದ್ದಾರೆ. ಅತೃಪ್ತ ಶಾಸಕರೊಂದಿಗೆ ಮುಂಬೈಯಲ್ಲಿದ್ದ ಸೋಮಶೇಖರ್ ಕಳೆದ ರಾತ್ರಿ ಬೆಂಗಳೂರಿಗೆ ಆಗಮಿಸಿದ್ದಾರೆ. ಇನ್ನುಳಿದ ಅತೃಪ್ತ ಶಾಸಕರು ಮುಂಬೈಯಿಂದ ನಗರಕ್ಕೆ ಆಗಮಿಸಿ ಸ್ಪೀಕರ್ ಎದುರು ಹಾಜರಾಗುವ ಸಾಧ್ಯತೆ ಇದೆ.

ಸ್ಪೀಕರ್ ಸುಪ್ರೀಂ ಆದೇಶ ಪಾಲಿಸುತ್ತಿಲ್ಲ

ಬೆಂಗಳೂರು: ಅತೃಪ್ತ ಶಾಸಕರ ರಾಜೀನಾಮೆ ವಿಚಾರ ಸಂಬಂಧ ಸ್ಪೀಕರ್ ರಮೇಶ್ ಕುಮಾರ್ ಸುಪ್ರೀಂಕೋರ್ಟ್ ನಿರ್ದೇಶನವನ್ನು ಸಮರ್ಪಕವಾಗಿ ಪಾಲಿಸುತ್ತಿಲ್ಲ ಎಂದು ಮಾಜಿ ಸಚಿವ ವಿ.ಸೋಮಣ್ಣ ಆರೋಪಿಸಿದ್ದಾರೆ. ವಿಧಾನ ಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕರ ರಾಜೀನಾಮೆ ವಿಚಾರದಲ್ಲಿ ವಕೀಲರ ಅಭಿಪ್ರಾಯವನ್ನು ಕೇಳುವುದು ಎಷ್ಟರ ಮಟ್ಟಿಗೆ ಸರಿ ಎಂಬುದನ್ನು ಅನುಭವವಿರುವ ಸ್ಪೀಕರ್ ಯೋಚಿಸಬೇಕು. ಮಾಜಿ ಅಡ್ವೊಕೇಟ್ ಜನರಲ್ ಅಶೋಕ್ ಹಾರನಹಳ್ಳಿ ಅವರನ್ನು ಹೊರಗಿಟ್ಟು ಕಾಂಗ್ರೆಸ್ ಕಾನೂನು ಘಟಕದ ವಕೀಲ ಶಶಿಕಿರಣ್ ಅವರನ್ನು ಮಾತ್ರ ತಮ್ಮ ಕಚೇರಿಗೆ ಕರೆಸಿಕೊಂಡಿದ್ದಾರೆ. ಶಾಸಕರು ಸ್ವತಂತ್ರವಾಗಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಲು ಬಿಡುತ್ತಿಲ್ಲ. ಇದು ಸಂವಿಧಾನ ತಜ್ಞರು ಆಗಿರುವ ರಮೇಶ್ ಕುಮಾರ್ ಅವರಿಗೆ ಶೋಭೆ ತರಲ್ಲ ಎಂದು ಗುಡುಗಿದ್ದಾರೆ.

ಐವರು ಮನೆಗಳ್ಳರ ಬಂಧನ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಅಪರಾಧ ಸುದ್ದಿಗಳು

ಮನೆಗಳ್ಳತನ ಹಾಗೂ ಕನ್ನಕಳವು ಸೇರಿದಂತೆ ವಿವಿಧ ಪ್ರಕರಣಗಳಿಗೆ ಸಂಬಂಧಿಸಿದಂತೆ ಐವರು ಆರೋಪಿಗಳನ್ನು ವಿಜಯ ನಗರ ಉಪವಿಭಾಗದ ಪೊಲೀಸರು ಬಂಧಿಸಿ, 42.56 ಲಕ್ಷ ರು. ಮೌಲ್ಯದ ಚಿನ್ನಾಭರಣ ವಶಪಡಿಸಿಕೊಂಡಿದ್ದಾರೆ.

ಬಸವೇಶ್ವರ ನಗರ: ರಾತ್ರಿ ವೇಳೆ ಕನ್ನಗಳವು ಮಾಡುತ್ತಿದ್ದ ಆರೋಪದಲ್ಲಿ ಮಹೇಶ್ ಹಾಗೂ ದಯಾನಂದ್ ಎಂಬುವರನ್ನು ಬಂಧಿಸಿ, 15 ಲಕ್ಷ ರು. ಮೌಲ್ಯದ ಚಿನ್ನಾಭರಣ ಜಪ್ತಿ ಮಾಡಲಾಗಿದೆ. ಇವರ ಬಂಧನದಿಂದ ಬಸವೇಶ್ವರನಗರ, ಬ್ಯಾಡರಹಳ್ಳಿ ಸೇರಿದಂತೆ ಐದು ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದಿದ್ದ ಕಳವು ಪ್ರಕರಣ ಬೆಳಕಿಗೆ ಬಂದಿದ್ದು, ಬಸವೇಶ್ವರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಲಾಗಿದೆ.

ಕಾಮಾಕ್ಷಿಪಾಳ್ಯ: ಬೀಗ ಹಾಕಿರುವ ಮನೆಗಳನ್ನು ಗುರುತಿಸಿ ಕಳ್ಳತನ ಮಾಡಿ ಐಷಾರಾಮಿ ಜೀವನ ನಡೆಸುತ್ತಿದ್ದ ನಾಗೇಶ್(33), ಹೇಮರಾಜು(34) ಎಂಬುವರನ್ನು ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಬಂಧಿಸಿ, 2.50 ಲಕ್ಷ ರು. ಮೌಲ್ಯದ 82 ಗ್ರಾಂ ಚಿನ್ನಾಭರಣ ವಶಕ್ಕೆ ಪಡೆದಿದ್ದಾರೆ.

ವಿಜಯನಗರ: ಬೀಗ ಹಾಕಿರುವ ಮನೆಗಳನ್ನು ಗುರುತಿಸಿ ಕಳವು ಮಾಡುತ್ತಿದ್ದ ಆರೋಪದಡಿ ಪ್ರಕಾಶ್ ಎಂಬಾತನನ್ನು ಬಂಧಿಸಿರುವ ವಿಜಯ ನಗರ ಠಾಣೆ ಪೊಲೀಸರು, 20 ಲಕ್ಷ ರುಪಾಯಿ ಮೌಲ್ಯದ 833 ಗ್ರಾಂ ತೂಕದ ಚಿನ್ನಾಭರಣ ವಶಕ್ಕೆ ಪಡೆದು, ವಿಚಾರಣೆ ಮುಂದುವರಿಸಿದ್ದಾರೆ.

ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ ಸ್ಪೀಕರ್

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಮೈತ್ರಿ ಸರಕಾರದ ಭವಿಷ್ಯ ನಿರ್ಣಯಿಸುವ ಶಾಸಕರ ರಾಜೀನಾಮೆ ಪ್ರಕರಣದ ಬಗ್ಗೆ ವಿಧಾನಸಭೆ ಸ್ಪೀಕರ್ ರಮೇಶ್ ಕುಮಾರ್ ಸಂಪೂರ್ಣ ವಿಡಿಯೊ ಚಿತ್ರೀಕರಣಕ್ಕೆ ಸೂಚನೆ ನೀಡಿರುವುದು ಗಮನ ಸೆಳೆದಿದೆ.

ಮತ್ತೊಂದೆಡೆ ಬಿಗಿ ಭದ್ರತೆ ವ್ಯವಸ್ಥೆ ಮಾಡುತ್ತಿದ್ದ ಪೊಲೀಸರು, ವಿಧಾನಸೌಧದ ಆವರಣವನ್ನು ಸಂಪೂರ್ಣ ವಿಡಿಯೊ ಕಣ್ಗಾವಲಿಗೆ ಒಳಪಡಿಸಿದ್ದರು. ಪೇದೆಗಳು ಅಲ್ಲಲ್ಲಿ ಕ್ಯಾಮೆರಾ ಹಿಡಿದು, ಒಳಗೆ ಬರುವವರ, ಹೊರ ಹೋಗುವವರನ್ನು ಚಿತ್ರೀಕರಣ ಮಾಡಿಕೊಳ್ಳುತ್ತಿದ್ದರು.

ಅತೃಪ್ತ ಶಾಸಕರ ರಾಜೀನಾಮೆ ಪ್ರಕರಣದ ಬಗ್ಗೆ ವಿಚಾರಣೆ ಮಾಡಿ ನಿರ್ಧಾರ ತಿಳಿಸುವಂತೆ ಸುಪ್ರೀಂ ಕೋರ್ಟ್ ನೀಡಿದ ಸೂಚನೆಯನ್ವಯ ಸ್ಪೀಕರ್ ರಮೇಶ್ ಕುಮಾರ್ ಪಾರದರ್ಶಕತೆಗೆ ಆದ್ಯತೆ ನೀಡಿದ್ದರು. ಇದಕ್ಕಾಗಿ ಖಾಸಗಿ ವಿಡಿಯೊ ಗ್ರಾಫರ್ ಒಬ್ಬರನ್ನು ನೇಮಿಸಿಕೊಂಡಿದ್ದರು. ಇದೇ ಮೊದಲ ಬಾರಿಗೆ ಶಾಸಕರ ರಾಜೀನಾಮೆ ಪ್ರಕರಣದ ವಿಚಾರಣೆಯಲ್ಲಿ ವಿಡಿಯೊ ಚಿತ್ರೀಕರಣ ಮಾಡಿದ್ದು, ಇದು ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದೆ.

ರಮೇಶ್ ಕುಮಾರ್ ಸಂಜೆ 4 ಗಂಟೆ ಸುಮಾರಿಗೆ ಕಚೇರಿಗೆ ಆಗಮಿಸುತ್ತಿದ್ದಂತೆ ತಮ್ಮ ಕೊಠಡಿಯ ಮುಂಭಾಗ ನಿಂತಿದ್ದ ವಿಡಿಯೊ ಗ್ರಾಫರ್‌ಗೆ ತಮ್ಮ ಕೊಠಡಿ ಮುಂದೆ ಇರುವ ಎಲ್ಲರನ್ನೂ ಚಿತ್ರೀಕರಣ ಮಾಡಿಕೊಂಡು, ನಂತರ ತಮ್ಮ ಕಚೇರಿಯೊಳಗೆ ಪ್ರವೇಶಿಸುವಂತೆ ಸೂಚಿಸಿದರು. ಬಳಿಕ ಸ್ಪೀಕರ್ ಕೊಠಡಿಯಲ್ಲಿ ನಡೆದ ಸಂಪೂರ್ಣ ವಿಚಾರಣೆಯನ್ನು ಚಿತ್ರೀಕರಣ ಮಾಡಿಕೊಳ್ಳಲಾಗಿದೆ.

ವಿಚಾರಣೆಗೂ ಮುನ್ನ ಸುದ್ದಿಗಾರರ ಜತೆ ಮಾತನಾಡಿದ ಸ್ಪೀಕರ್ ರಮೇಶ್ ಕುಮಾರ್, ನ್ಯಾಯಾಲಯದ ಆದೇಶದಂತೆ ವಿಚಾರಣೆ ನಡೆಸಿ ತೀರ್ಮಾನ ಮಾಡಿ, ನ್ಯಾಯಾಲಯಕ್ಕೆ ತಿಳಿಸಲಾಗುವುದು. ಸುಪ್ರೀಂ ಕೋರ್ಟ್‌ನಲ್ಲಿ ತಮ್ಮ ಪರವಾಗಿ ವಕೀಲರು ಹಾಜರಾಗಲಿದ್ದಾರೆ. ನನ್ನ ವಕೀಲರು ಏನು ಹೇಳಬೇಕು ಅದನ್ನು ಕೋರ್ಟ್‌ನಲ್ಲಿ ಹೇಳುತ್ತಾರೆ. ಅದರ ಮೇಲೆ ಏನಾಗುತ್ತದೆಯೋ ಆಮೇಲೆ ನೋಡೋಣ. ಬಳಿಕ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.

ಪೊಲೀಸರ ಸರ್ಪಗಾವಲಿನಲ್ಲಿ ವಿಧಾನಸೌಧದಿಂದ ಹೊರಬಂದ ಶಾಸಕರಾದ ಎಚ್.ವಿಶ್ವನಾಥ್ ಮತ್ತು ಬಿ.ಸಿ.ಪಾಟೀಲ್.

ಸ್ಪೀಕರ್ ಬಳಿ ವಿಚಾರಣೆಗೆ ಆಗಮಿಸಿದ್ದ ಬಳಿಕ ವಿಧಾನಸೌಧದಿಂದ ಹೊರ ಬರುತ್ತಿದ್ದ ವೇಳೆ ಶಾಸಕ ಎಸ್.ಟಿ.ಸೋಮಶೇಖರ್ ಟಾಟಾ ಮಾಡಿದ ದೃಶ್ಯ.

ಸ್ಪೀಕರ್ ಕಚೇರಿಯಲ್ಲಿ ವಿಚಾರಣೆ ಮುಗಿದ ಬಳಿಕ ಎಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಪ್ರಯಾಣ ಬೆಳೆಸಿದ ಅತೃಪ್ತ ಶಾಸಕರು.

ಜನಾದೇಶ ಕಡೆಗಣಿಸಿದ ಪಕ್ಷಗಳಿಗೆ ಜನ ಪಾಠ ಕಲಿಸಲಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು



ಕಾಂಗ್ರೆಸ್-ಜೆಡಿಎಸ್‌ನ ಮೈತ್ರಿ ಸರಕಾರ ಅಧಿಕಾರ ಉಳಿಸಿಕೊಳ್ಳಲು ಹೆಣಗಾಡುತ್ತಿದ್ದು, ರಾಜ್ಯದ ಆಡಳಿತವನ್ನು ಸಂಪೂರ್ಣ ನಿರ್ಲಕ್ಷಿಸಿದೆ. ಈ ಎರಡೂ ಪಕ್ಷಗಳ ಶಾಸಕರು ಅಧಿಕಾರಕ್ಕಾಗಿ ಹಾಗೂ ಸ್ವಾರ್ಥಕ್ಕಾಗಿ ಸರಕಾರವನ್ನೇ ಬ್ಲಾಕ್‌ಮೇಲ್ ಮಾಡುತ್ತಿದ್ದಾರೆ.

ಸರಕಾರವಂತೂ ಶಾಸಕರನ್ನು ತಹಬಂದಿಯಲ್ಲಿಟ್ಟುಕೊಳ್ಳಲು ವ್ಯರ್ಥ ಪ್ರಯತ್ನ ನಡೆಸುತ್ತಿದೆ.

ಜನತೆಯ ಮತಗಳನ್ನು ಪಡೆದು ಗೆದ್ದ ಮೇಲೆ ಜನರ ಹಿತಾಸಕ್ತಿಯನ್ನು ಶಾಸಕರು ಸಂಪೂರ್ಣ ಕಡೆಗಣಿಸಿ, ಬಿಜೆಪಿಯ ಆಮಿಷಗಳಿಗೆ ಬಲಿಯಾಗಿ ರೆಸಾರ್ಟ್‌ನಲ್ಲಿ ಅಡಗಿಕೊಂಡಿರುವುದು ಮತದಾರರಿಗೆ ಬಗೆದ ದ್ರೋಹ ಎಂದು ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಇಲ್ಯಾಸ್ ಮುಹಮ್ಮದ್ ತುಂಬೆ ಹೇಳಿದ್ದಾರೆ.

ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ರೈತರು ಕಂಗಾಲಾಗಿದ್ದು, ಸಮಸ್ಯೆಗಳ ಸುಳಿಯಲ್ಲಿ ಸಿಲುಕಿರುವ ರೈತರ ಪರಿಸ್ಥಿತಿಯ ಬಗ್ಗೆ ಯೋಚಿಸಲು ಸರಕಾರಕ್ಕೆ ಸಮಯವಿಲ್ಲದಾಗಿದೆ. ತಮ್ಮ ಸ್ವಾರ್ಥಕ್ಕಾಗಿ ರಾಜ್ಯದ ಜನತೆಯನ್ನು ಕಡೆಗಣಿಸುತ್ತಿರುವ ರಾಜಕಾರಣಿಗಳಿಗೆ ಮತದಾರರರು ಸೂಕ್ತ ಪಾಠ ಕಲಿಸಬೇಕಾಗಿದೆ ಎಂದು ಇಲ್ಯಾಸ್ ಮುಹಮ್ಮದ್ ತುಂಬೆ ಕರೆ ನೀಡಿದ್ದಾರೆ.

ಬಿಜೆಪಿಯು ಪ್ರಜಾಪ್ರಭುತ್ವವನ್ನೇ ಬುಡಮೇಲು ಮಾಡುತ್ತಿದ್ದು, ಶಾಸಕರ ಖರೀದಿ, ಆಮಿಷ, ರೆಸಾರ್ಟ್ ಬಂಧನ ಇತ್ಯಾದಿಗಳಿಂದ ಸರಕಾರವನ್ನು ಪತನಗೊಳಿಸಲು ಪ್ರಯತ್ನಿಸುತ್ತಿರುವುದು ಅತ್ಯಂತ ಖಂಡನೀಯ. ಅಧಿಕಾರಕ್ಕಾಗಿ ಎಷ್ಟೇ ಕೆಳಮಟ್ಟಕ್ಕೂ ಇಳಿಯಲು ಹೇಸದ ಬಿಜೆಪಿ, ರಾಜ್ಯದ ಜನತೆಗೆ ಸದಾ ಮೋಸ ಮಾಡುತ್ತಲೇ ಇರಲು ಸಾಧ್ಯವಿಲ್ಲ ಎಂದು ತಿಳಿದಿರಲಿ ಎಂದು ಎಚ್ಚರಿಸಿದ್ದಾರೆ.

ಈ ಹಿಂದೆ ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ ಅಖಂಡ ಭ್ರಷ್ಟಾಚಾರ, ಅಧಿಕಾರದ ದುರುಪಯೋಗ, ಲೈಂಗಿಕ ಹಗರಣಗಳಿಂದ ಸದ್ದು ಮಾಡುತ್ತಾ ಕಾಲ ಕಳೆದಿದ್ದು, ಇದೀಗ ಯಾವುದೇ ಅನೀತಿಯುತ ಮಾರ್ಗದಲ್ಲಾದರೂ ಅಧಿಕಾರ ಪಡೆಯಲು ಹರಸಾಹಸ ಪಡುತ್ತಿರುವುದು ಅಕ್ಷಮ್ಯ ಎಂದು ಹೇಳಿದ್ದಾರೆ.

ರಾಜ್ಯವನ್ನು ಕಡೆಗಣಿಸಿದ ಬಿಜೆಪಿ, ಜೆಡಿಎಸ್, ಕಾಂಗ್ರೆಸ್‌ಗೆ ಮತದಾರರು ಚುನಾವಣೆಯ ಸಂದರ್ಭದಲ್ಲಿ ಸರಿಯಾದ ಪಾಠ ಕಲಿಸಿ ಪ್ರಜಾಪ್ರಭುತ್ವವನ್ನು ಉಳಿಸುವ ಹಾಗೂ ರಾಜ್ಯವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯುವತ್ತ ಕೈ ಜೋಡಿಸಬೇಕಾಗಿದೆ ಎಂದಿದ್ದಾರೆ.

ಎಂಜಿನಿಯರ್‌ಗಳ ಬಡ್ತಿ, ವರ್ಗಾವಣೆಗೆ ₹ 500 ಕೋಟಿ ಪಡೆದಿದ್ದಾರೆಂದು ಆರೋಪ

ಸಚಿವ ರೇವಣ್ಣ ವಿರುದ್ಧ ರಾಜ್ಯಪಾಲರಿಗೆ ದೂರು

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಲೋಕೋಪಯೋಗಿ ಇಲಾಖೆಯಲ್ಲಿ ತರಾತುರಿಯಲ್ಲಿ ಎಂಜಿನಿಯರ್‌ಗಳ ಬಡ್ತಿ ಹಾಗೂ ವರ್ಗಾವಣೆ ಮಾಡಲು 500 ಕೋಟಿ ರು. ಕಿಕ್ ಬ್ಯಾಕ್ ಪಡೆದಿದ್ದಾರೆ ಎಂದು ಆರೋಪಿಸಿ ಸಚಿವ ಎಚ್.ಡಿ.ರೇವಣ್ಣ ವಿರುದ್ಧ ರೈತ ಮೋರ್ಚಾ ಸಂಘಟನೆಯ ಉಪಾಧ್ಯಕ್ಷ ಎಸ್.ಲಿಂಗಮೂರ್ತಿ ರಾಜ್ಯಪಾಲರಿಗೆ ದೂರು ನೀಡಿದ್ದಾರೆ.

ಲೋಕೋಪಯೋಗಿ ಇಲಾಖೆಯಲ್ಲಿ ಸೋಮವಾರ ಸುಮಾರು 800 ಜನ ಎಂಜಿನಿಯರ್‌ಗಳಿಗೆ ಬಡ್ತಿ ಹಾಗೂ ವರ್ಗಾವಣೆ ಮಾಡಿದ್ದು, ಇದಕ್ಕಾಗಿ 500 ಕೋಟಿ ರುಪಾಯಿ ಪಡೆದಿದ್ದಾರೆ. ಎಸ್ಸಿ, ಎಸ್ಟಿ ಮತ್ತು ಒಬಿಸಿ ಸಮುದಾಯದ ಎಂಜಿನಿಯರ್‌ಗಳು ವರ್ಗಾವಣೆ ಮಾಡಿಸಿಕೊಳ್ಳಲು ಒಂದು ವರ್ಷದಿಂದ ಕಾಯುತ್ತಿದ್ದರು. ಇಂತಹ ಸಮಯದಲ್ಲಿ ಹಣ ಪಡೆದು ಏಕಾಏಕಿ ಮನಬಂದಂತೆ ಎಂಜಿನಿಯರ್‌ಗಳನ್ನು ವರ್ಗಾವಣೆ ಮಾಡಲಾಗಿದೆ ಎಂದು ದೂರಿನಲ್ಲಿ ಗಂಭೀರವಾಗಿ ಆರೋಪಿಸಿದ್ದಾರೆ.

ಈ ಕುರಿತು ಸೂಕ್ತ ತನಿಖೆ ನಡೆಸಿ, ಸರಕಾರ ಮಾಡಿರುವ ವರ್ಗಾವಣೆಯನ್ನು ಹಿಂಪಡೆಯಬೇಕು ಎಂದು ರಾಜ್ಯಪಾಲರಿಗೆ ಲಿಂಗಮೂರ್ತಿ ದೂರು ನೀಡಿದ್ದಾರೆ.

ಒಂದೆಡೆ ಶಾಸಕರು ರಾಜೀನಾಮೆ ಪರ್ವದಿಂದ ಮೈತ್ರಿ ಸರಕಾರಕ್ಕೆ ಎದುರಾಗಿರುವ ಅಭದ್ರತೆಯನ್ನು ಲೆಕ್ಕಿಸದೆ ಸಚಿವ ರೇವಣ್ಣ ತಮ್ಮ ಲೋಕೋಪಯೋಗಿ ಇಲಾಖೆಯಲ್ಲಿ ಇನ್ನೂ ಸಕ್ರಿಯವಾಗಿದ್ದಾರೆ. ಅಧಿಕಾರಿಗಳ ವರ್ಗಾವಣೆ ಮತ್ತು ಬಡ್ತಿ ಸಂಬಂಧ ತರಾತುರಿಯಲ್ಲಿ ಇಲಾಖಾ ಪದೋನ್ನತಿ ಸಮಿತಿ ಸಭೆ ನಡೆಸಿದ್ದರು. ಮೈತ್ರಿ ಉಳಿಸಿಕೊಳ್ಳಲು ಎರಡೂ ಪಕ್ಷದ ಮುಖಂಡರು ತಲೆಕೆಡಿಸಿಕೊಂಡಿದ್ದಾರೆ. ಇತ್ತ ರೇವಣ್ಣ ಮಾತ್ರ ವರ್ಗಾವಣೆ ಕಡತ ವಿಲೇವಾರಿಯಲ್ಲಿ ಕೈ ಚಳಕಕ್ಕೆ ಇಳಿದಿದ್ದಿರಾ ಎನ್ನುವ ಅನುಮಾನ ಮೂಡಿತ್ತು.

ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಅಧಿಕಾರಿಗಳಿಗೆ ಬಡ್ತಿ ನೀಡಿರುವುದರ ಹಿಂದೆ ಸಚಿವರ ಸ್ವಹಿತಾಸಕ್ತಿ ಅಡಗಿದೆ ಎಂಬ ಆರೋಪ ಕೇಳಿ ಬಂದಿತ್ತು. ಆತುರದಲ್ಲಿ ಬಡ್ತಿ ನೀಡುವ ವಿಷಯ ಕುರಿತು ಸಭೆ ನಡೆಸಲು ಅಧಿಕಾರಿಗಳ ಮಟ್ಟದಲ್ಲಿ ವಿರೋಧ ವ್ಯಕ್ತವಾಗಿತ್ತು. ವಿಕಾಸಸೌಧದಲ್ಲಿ ನೆಪಮಾತ್ರಕ್ಕೆ ಸಭೆ ನಡೆಸಿದ ಅಧಿಕಾರಿಗಳು ರಹಸ್ಯ ಸ್ಥಳಕ್ಕೆ ತೆರಳಿ ಜ್ಯೇಷ್ಠತಾ ಪಟ್ಟಿ ಸಿದ್ಧಪಡಿಸಿದ್ದರು ಎಂದು ತಿಳಿದು ಬಂದಿದೆ.

ಒಂದೇ ದಿನ ಗುತ್ತಿಗೆದಾರರಿಗೆ ₹1,500 ಕೋಟಿ ಬಾಕಿ ಬಿಲ್ ಪಾಸ್

ರೆಬೆಲ್ ಶಾಸಕರ ರಾಜೀನಾಮೆಯಿಂದ ದೋಸ್ತಿ ಸರಕಾರಕ್ಕೆ ಎದುರಾಗಿರುವ ಅಭದ್ರತೆಯ ನಡುವೆ ಲೋಕೋಪಯೋಗಿ ಇಲಾಖೆಯಲ್ಲಿ 1,500 ಕೋಟಿ ರು. ಬಾಕಿ ಬಿಲ್‌ಗಳನ್ನು ಗುತ್ತಿಗೆದಾರರಿಗೆ ಪಾವತಿಸಲಾಗಿದೆ. ಮೈತ್ರಿ ಸರಕಾರ ಅಸ್ತಿತ್ವಕ್ಕೆ ಬಂದ ಬಳಿಕ ಕೈಗೊಂಡ ರಸ್ತೆ ಹಾಗೂ ಸೇತುವೆ ನಿರ್ಮಾಣದ ಕಾಮಗಾರಿಗಳ ಬಾಕಿ ಬಿಲ್‌ಗಳಿಗೆ ಮಾತ್ರ ಸಚಿವ ಎಚ್.ಡಿ.ರೇವಣ್ಣ ಸಹಿ ಹಾಕಿರುವುದು ಹಲವು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ಸಚಿವ ಎಚ್.ಡಿ.ರೇವಣ್ಣ ನೇತೃತ್ವದಲ್ಲಿ ನಗರದಲ್ಲಿ ರಹಸ್ಯ ಸ್ಥಳದಲ್ಲಿ ಬುಧವಾರ ನಡೆದ ಮುಖ್ಯ ಎಂಜಿನಿಯರ್‌ಗಳು, ಸೂಪರಿಂಟೆಂಡೆಂಟ್ ಎಂಜಿನಿಯರ್‌ಗಳು ಹಾಗೂ ಗುತ್ತಿಗೆದಾರರ ಸಭೆಯಲ್ಲಿ ಬಾಕಿ ಬಿಲ್‌ಗಳನ್ನು ಪಾಸ್ ಮಾಡಲಾಗಿದೆ. ಸಂಪರ್ಕ ಮತ್ತು ಕಟ್ಟಡ (ದಕ್ಷಿಣ) 400 ಕೋಟಿ, ಧಾರವಾಡ ವಲಯದ 400 ಕೋಟಿ, ಈಶಾನ್ಯ ವಲಯದ 300 ಕೋಟಿ, ರಾಷ್ಟ್ರೀಯ ಹೆದ್ದಾರಿ ವಿಭಾಗದ 100 ಕೋಟಿ, ಎಸ್‌ಎಸ್‌ಪಿಪಿಯ 100 ಕೋಟಿ, ಕೆಶಿಪ್‌ನ 100 ಕೋಟಿ, ಕೆಆರ್‌ಡಿಸಿಎಲ್‌ನ 100 ಕೋಟಿ ಬಿಲ್‌ಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ.

ಎಚ್‌ಡಿಡಿ ಕುಟುಂಬದ ವಿರುದ್ಧ ಅವಹೇಳನಕಾರಿ ಹೇಳಿಕೆ: ಆದೇಶ ಕಾಯ್ದಿರಿಸಿದ ಹೈಕೋರ್ಟ್

ಹೈಕೋರ್ಟ್ ಸುದ್ದಿಗಳು

ಬೆಂಗಳೂರು: ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಕುಟುಂಬದ ವಿರುದ್ಧ ಅವಹೇಳನಕಾರಿ ಪೋಸ್ಟ್ ಪ್ರಕಟಿಸಿದ ವಿಚಾರವಾಗಿ ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣ ರದ್ದು ಕೋರಿ ಟ್ರೋಲ್ ಮಗಾ ಫೇಸ್‌ಬುಕ್ ಪುಟದ ಅಡ್ಮಿನ್ ಎಸ್. ಜೈಕಾಂತ್ ಸಲ್ಲಿಸಿದ್ದ ಅರ್ಜಿ ಸಂಬಂಧ ಹೈಕೋರ್ಟ್ ಕಡೆಯ ವಾದವನ್ನು ಆಲಿಸಿ ಆದೇಶವನ್ನು ಕಾಯ್ದಿರಿಸಿದೆ.

ಈ ಕುರಿತು ಎಸ್.ಜೈಕಾಂತ್ ಅವರು ಪ್ರಕರಣ ರದ್ದುಕೋರಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನ್ಯಾ. ಪಿ.ಎಸ್.ದಿನೇಶ್ ಕುಮಾರ್ ಅವರಿದ್ದ ಏಕಸದಸ್ಯ ನ್ಯಾಯಪೀಠದಲ್ಲಿ ನಡೆಯಿತು. ಅರ್ಜಿದಾರರ ಪರ ವಾದಿಸಿದ ವಕೀಲ ಎಂ.ಅರುಣ್ ಶ್ಯಾಮ್ ಅವರು, ದೇವೇಗೌಡ ಅವರ ಕುಟುಂಬದ ವಿರುದ್ಧ ಫೇಸ್‌ಬುಕ್ ಪೇಜ್‌ನಲ್ಲಿ ಅವಹೇಳಕಾರಿಯಾಗಿ ಹೇಳಿಕೆ ನೀಡಿದ್ದಾರೆ ಎಂದು ಪೊಲೀಸರು ಒಂದೆ ವಿಷಯದ ಪೋಸ್ಟ್‌ಗೆ ಎರಡು ಎಫ್‌ಐಆರ್ ದಾಖಲಿಸಿ, ಕಾನೂನನ್ನು ಉಲ್ಲಂಘಿಸಿದ್ದಾರೆ ಎಂದು ಪೀಠಕ್ಕೆ ತಿಳಿಸಿದರು.

ಸರಕಾರದ ಪರ ವಾದಿಸಿದ ಅಡ್ವೊಕೇಟ್ ಜನರಲ್ ಉದಯ ಹೊಳ್ಳ ಅವರು, ದೇವೇಗೌಡ ಅವರ ಕುಟುಂಬದ ವಿರುದ್ಧ ಅವಹೇಳನಕಾರಿ ಹೇಳಿಕೆಯ ಪೋಸ್ಟ್ ಅನ್ನು ಎರಡು ಬಾರಿ ಹಾಕಿದ್ದರಿಂದ ಎರಡು ಪ್ರತ್ಯೇಕ ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ ಎಂದು ಪೀಠಕ್ಕೆ ತಿಳಿಸಿದರು. ವಕೀಲರ ವಾದ ಆಲಿಸಿದ ನ್ಯಾಯಪೀಠವು ಆದೇಶವನ್ನು ಕಾಯ್ದಿರಿಸಿತು.

ಪ್ರಕರಣವೇನು?

ಜೆಡಿಎಸ್ ಮುಖಂಡರಾದ ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ಹಾಗೂ ನಿಖಿಲ್ ಕುಮಾರಸ್ವಾಮಿ ಅವರನ್ನು ಅವಾಚ್ಯ ಶಬ್ದಗಳಿಂದ ನಿಂದಿಸುವ ಪೋಸ್ಟ್‌ಗಳನ್ನು 2019ರ ಮೇ 26ರಂದು ಟ್ರೋಲ್ ಮಗಾ ಹೆಸರಿನಲ್ಲಿ ಫೇಸ್‌ಬುಕ್‌ನಲ್ಲಿ ಪ್ರಕಟಿಸಿ ತೇಜೋವಧೆಗೆ ಯತ್ನಿಸಲಾಗಿದೆ ಎಂದು ಜೆಡಿಎಸ್ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಎಸ್.ಪಿ.ಪ್ರದೀಪ್ ಕುಮಾರ್ ಶ್ರೀರಾಮಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಟೆಕ್ಕಿ ಮೇಲೆ ಹಲ್ಲೆ

ಬೆಂಗಳೂರು: ಆಟೋ ಚಾಲಕನೊಬ್ಬ ಟೆಕ್ಕಿ ಮೇಲೆ ಹಲ್ಲೆ ನಡೆಸಿರುವ ಘಟನೆ ವೈಟ್‌ಫೀಲ್ಡ್‌ನಲ್ಲಿ ನಡೆದಿದೆ. ರಾಹುಲ್ ಎಂಬ ಟೆಕ್ಕಿ ಯೂಲು ಬೈಕ್ ಪಾರ್ಕಿಂಗ್ ಸ್ಥಳದಲ್ಲೇ ತನ್ನ ಬೈಕ್ ಪಾರ್ಕ್ ಮಾಡುವ ವೇಳೆ ಆಟೋ ಚಾಲಕ ಆಟೋವನ್ನು ಹಿಂಬದಿಯಿಂದ ಬೈಕ್‌ಗೆ ತಗುಲಿಸಿದ್ದಾನೆ. ಇದನ್ನು ಪ್ರಶ್ನಿಸಿದ ರಾಹುಲ್ ಮೇಲೆ ಆಟೋ ಚಾಲಕ ಹಲ್ಲೆ ಮಾಡಿದ್ದಾನೆ. ಈ ಬಗ್ಗೆ ವೈಟ್‌ಫೀಲ್ಡ್ ಪೊಲೀಸ್ ಠಾಣೆಯಲ್ಲಿ ಯೂಲು ಬೈಕ್ ಸಿಬ್ಬಂದಿ ದೂರು ದಾಖಲಿಸಿದ್ದಾರೆ.

A-1 TURNING POINT ACADEMY
PSI
SPOKEN ENGLISH TRAINING..
IF YOU ARE NOT SATISFIED YOUR FEES WILL BE RE-FUNDED
8884202238
15 TH CROSS MALLESHWARAM B'LORE 03